सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ),ನಂ.8, 1ನೇ ಮಹಡಿ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52

ರಾಚುಆ:67:ಇಜಿಪಿ: 22 ದಿನಾಂಕ:28-05-2020

## ಪತ್ರಿಕಾ ಪ್ರಕಟಣೆ

**ವಿಷಯ: ಕೋವಿಡ್-19 ವೈರಸ್ ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿಗಳ ಸಾರ್ವತ್ರಿಕ ಚುನಾವಣೆಗಳನ್ನು ಮುಂದೂಡುವ ಬಗ್ಗೆ**

ರಾಜ್ಯದಲ್ಲಿನ 6025 ಗ್ರಾಮ ಪಂಚಾಯಿತಿಗಳಲ್ಲಿ ಜೂನ್-2020ರ ಮಾಹೆಯಿಂದ ಆಗಸ್ಟ್-2020ರ ಮಾಹೆಯವರೆಗೆ ಸುಮಾರು 5800 ಗ್ರಾಮ ಪಂಚಾಯಿತಿಗಳ ಅವಧಿ ಮುಕ್ತಾಯವಾಗಲಿದೆ. ರಾಜ್ಯ ಚುನಾವಣಾ ಆಯೋಗವು ಅವಧಿ ಮುಕ್ತಾಯವಾಗುವ ಗ್ರಾಮ ಪಂಚಾಯಿತಿಗಳಿಗೆ ಅವಧಿ ಮುಕ್ತಾಯ ಪೂರ್ವದಲ್ಲಿ ಸಾರ್ವತ್ರಿಕ ಚುನಾವಣೆಯನ್ನು ನಡೆಸಲು ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿತ್ತು. ಮತದಾರರ ಪಟ್ಟಿಯನ್ನು ತಯಾರಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿತ್ತು. ಈ ಹಂತದಲ್ಲಿ ದೇಶದಾದ್ಯಂತ ಕೋವಿಡ್-19 ನಿಯಂತ್ರಣಕ್ಕಾಗಿ ಕೇಂದ್ರ/ರಾಜ್ಯ ಸರ್ಕಾರಗಳು ಲಾಕ್‌ಡೌನ್ ಮಾಡಿದ್ದರಿಂದ, ಮತದಾರರ ಪಟ್ಟಿಯ ತಯಾರಿಕೆ ಪ್ರಕ್ರಿಯೆಯನ್ನು ಹಾಗೂ ಇತರೆ ಚುನಾವಣಾ ಸಿದ್ದತೆಗಳನ್ನು ಸ್ಥಗಿತಗೊಳಿಸಲಾಯಿತು. ಅಲ್ಲದೆ, ಸರ್ಕಾರವು ಇತ್ತೀಚೆಗೆ ದಿನಾಂಕ:31.03.2020ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 5ಕ್ಕೆ ತಿದ್ದುಪಡಿ ಮಾಡಿ ಮೀಸಲಾತಿಯನ್ನು ಹತ್ತು ವರ್ಷದ ಬದಲಿಗೆ ಐದು ವರ್ಷಗಳು ಎಂದು ಪ್ರತಿನಿಯೋಜಿಸಿ ತಿದ್ದುಪಡಿ ಮಾಡಿರುವುದರಿಂದ, ಈಗ ಹೊಸದಾಗಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳಲ್ಲಿನ ಸ್ಥಾನಗಳನ್ನು ಆವರ್ತನೆಯ ಮೇಲೆ ಮೀಸಲಿಡುವ) ನಿಯಮಗಳು, 1998 ರಂತೆ ಕ್ಷೇತ್ರಗಳ ಮೀಸಲು ಸ್ಥಾನಗಳನ್ನು ಆವರ್ತನೆಯ ಮೇಲೆ ಹಂಚಿಕೆ ಮಾಡಿ ನಿಗದಿಪಡಿಸಬೇಕಾಗಿರುತ್ತದೆ.

ಭಾರತ ಸಂವಿಧಾನದ ಪರಿಚ್ಛೇದ 243-ಇ ರಲ್ಲಿ ಪಂಚಾಯಿತಿಗಳ ಅವಧಿಯು ಮುಕ್ತಾಯಗೊಳ್ಳುವುದಕ್ಕೆ ಮುಂಚಿತವಾಗಿ ಹೊಸದಾಗಿ ಪಂಚಾಯಿತಿಯನ್ನು ರಚಿಸಲು ಚುನಾವಣೆ ನಡೆಸಬೇಕಾಗಿರತ್ತದೆ. ಕರ್ನಾಟಕ ಗ್ರಾಮ ಸ್ವರಾಜ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 308ಎಎ ರಂತೆಯೂ ರಾಜ್ಯ ಚುನಾವಣಾ ಆಯೋಗವು ಪಂಚಾಯಿತಿಯ ಅವಧಿಯು ಪೂರ್ಣಗೊಳ್ಳುವುದಕ್ಕೆ ಮೊದಲು ಚುನಾವಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

ಆದರೆ, ಕೋವಿಡ್-19 ಸಾಂಕ್ರಾಮಿಕವಾಗಿ ಹರಡುತ್ತಿದ್ದು, ಜನಸಾಮಾನ್ಯರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವ ಹಿನ್ನೆಲೆಯಲ್ಲಿ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ದಿನಾಂಕ: 24.03.2020ರ ಆದೇಶದಲ್ಲಿ ಕೋವಿಡ್-19 ನಿಯಂತ್ರಣಕ್ಕಾಗಿ ದೇಶದಾದ್ಯಂತ ಸಮಾಜಿಕ ಅಂತರ (Social distancing) ಕಾಯ್ದುಕೊಳ್ಳುವ ಬಗ್ಗೆ ಆದೇಶಿಸಿದ್ದು, ಸದರಿ ಆದೇಶದಂತೆ, ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ರಾಷ್ಟ್ರೀಯ ವಿಪತ್ತು ನಿರ್ವಹಣಾ ಕಾಯ್ದೆ 2005ರ ಕಲಂ 10(2)(1)ರ ಅಡಿಯಲ್ಲಿ ಕೋವಿಡ್-19ರ ಹರಡುವಿಕೆಯ ನಿಯಂತ್ರಣದ ಬಗ್ಗೆ ಹಾಗೂ ಸಾಮಾಜಿಕ ಆರೋಗ್ಯ ಕಾಪಾಡುವ ಮತ್ತು ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳನ್ನು ತಡೆಗಟ್ಟುವ ದೃಷ್ಟಿಯಿಂದ, ಸಾಮಾನ್ಯ ಜನರ ಚಲನವಲನಗಳನ್ನು ನಿಯಂತ್ರಿಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಿದ್ದು, ಅದರಂತೆ ದೇಶದಾದ್ಯಂತ ಕ್ರಮವಹಿಸಲು ಸೂಚನೆಗಳನ್ನು ನೀಡಲಾಗಿದೆ. ಈ ಸಂಬಂಧ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಕೋವಿಡ್-19 ಸೋಂಕು ಹರಡುವಿಕೆಯ ನಿಯಂತ್ರಣ ಸಾಧಿಸಲು ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಲಾಕ್‌ಡೌನ್ ಕುರಿತ ಮಾರ್ಗಸೂಚಿಗಳನ್ನು ಕರ್ನಾಟಕದ ಎಲ್ಲಾ ಇಲಾಖೆಗಳಿಗೆ, ಜಿಲ್ಲಾಧಿಕಾರಿಗಳಿಗೆ, ಪೋಲೀಸ್ ವರಿಷ್ಠಾಧಿಕಾರಿಗಳಿಗೆ ಮತ್ತಿತರೆ ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಆದೇಶಿಸಲಾಗುತ್ತಿದೆ.

ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ನಡೆಸಲು ವಾಸ್ತವ ಸ್ಥಿತಿಯ ಬಗ್ಗೆ ಜಿಲ್ಲಾಧಿಕಾರಿಗಳು ನೀಡಿರುವ ವರದಿಗಳನ್ನು ಪರಿಶೀಲಿಸಲಾಗಿ ಕೋವಿಡ್-19 ನಿಯಂತ್ರಣ ಕಾರ್ಯದಲ್ಲಿ ಸಂಪೂರ್ಣ ಜಿಲ್ಲಾಡಳಿತವು ತೊಡಗಿರುವುದರಿಂದ ಚುನಾವಣಾ ಕಾರ್ಯಕ್ಕೆ ಸಿಬ್ಬಂದಿಗಳ, ಕೊರತೆ, ಸಾರಿಗೆ ವ್ಯವಸ್ಥೆ ಕೊರತೆ, ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ತೊಂದರೆಗಳುಂಟಾಗುವುದಾಗಿ ಕಂಡು ಬಂದಿರುತ್ತದೆ.

28/05/2020

ಚುನಾವಣೆಗೆ ಸಂಬಂದಿಸಿದಂತೆ, ಮತದಾರರ ಪಟ್ಟಿ ತಯಾರಿಕೆ, ಮತದಾನ ಮತ್ತು ಮತಗಳ ಎಣಿಕೆ ದಿನಾಂಕಗಳಂದು ಜನಸಾಮಾನ್ಯರ, ಹಾಗೂ ಚುನಾವಣಾ ಕರ್ತವ್ಯ ನಿರತ ಅಧಿಕಾರಿಗಳು, ಸಿಬ್ಬಂದಿಗಳು, ಪೋಲಿಂಗ್ ಏಜಂಟರು, ರಾಜಕೀಯ ಪಕ್ಷಗಳು, ಸಹಾಯಕ ಸಿಬ್ಬಂದಿಗಳ ಓಡಾಟ ಮತ್ತು ಒಂದುಕಡೆ ಸೇರಬೇಕಾದ ಸಂದರ್ಭಗಳು ಅನಿವಾರ್ಯವಾಗಿ ಉಂಟಾಗುತ್ತದೆ. ಇದರಿಂದ ಜನಸಾಮಾನ್ಯರ ಆರೋಗ್ಯದ ರಕ್ಷಣೆಗೆ ಬಾದಕ ಉಂಟಾಗುತ್ತದೆ ಮತ್ತು ವೈರಸ್ ಹರಡುವಿಕೆಗೆ ಅವಕಾಶ ಉಂಟಾಗುತ್ತದೆ.

ಮಾನ್ಯ ಸರ್ವೋಚ್ಚನ್ಯಾಯಾಲಯವು ಕಿಷನ್‌ಸಿಂಗ್ ತೋಮರ್ ವಿರುದ್ಧ ಸಿಟಿ ಮುನಿಸಿಪಲ್ ಕಾರ್ಪೋರೇಷನ್, ಅಹಮದಾಬಾದ್ ಮತ್ತು ಇತರರು, ಪ್ರಕರಣದಲ್ಲಿ ನೀಡಿರುವ ಆದೇಶದಲ್ಲಿ, ಮಾನವ ನಿರ್ಮಿತ ಅವಘಡಗಳಿಂದಾಗಿ ಕಾನೂನು ಸುವ್ಯವಸ್ಥೆ ಹಾಳಾದ ಪರಿಸ್ಥಿತಿಯಲ್ಲಿ, ಅಥವಾ ನೈಸರ್ಗಿಕ ವಿಪತ್ತು ಸಂದರ್ಭಗಳಲ್ಲಿ ಚುನಾವಣೆ ಪ್ರಕ್ರಿಯೆ ಕೈಗೊಳ್ಳುವ ಪ್ರಾಧಿಕಾರಗಳಿಗೆ ಚುನಾವಣೆ ನಡೆಸುವುದು ಕಷ್ಟಸಾಧ್ಯವೆಂದು ಹಾಗೂ ಇಂತಹ ಪರಿಸ್ಥಿತಿಯನ್ನು "ಅಸಾಧಾರಣ ಪರಿಸ್ಥಿತಿ" (EXCEPTIONAL CIRCUMSTANCE) ಎಂದು ಉಲ್ಲೇಖಿಸಲಾಗಿರುತ್ತದೆ.

ರಾಜ್ಯ ಚುನಾವಣಾ ಆಯೋಗವು, ಗ್ರಾಮ ಪಂಚಾಯಿತಿಗಳ ಸಾರ್ವತ್ರಿಕ ಚುನಾವಣೆಯನ್ನು ನಡೆಸುವ ಸಾಧ್ಯಾಸಾಧ್ಯತೆಗಳ ಬಗ್ಗೆ ಪರಿಶೀಲಿಸಿದೆ. ಪ್ರಸ್ತುತ ಪರಿಸ್ಥಿತಿಯನ್ನು "ಅಸಾಧಾರಣ ಪರಿಸ್ಥಿತಿ" (EXCEPTIONAL CIRCUMSTANCE) ಎಂದು ಪರಿಗಣಿಸಿ, ಭಾರತ ಸಂವಿಧಾನದ ಪರಿಚ್ಛೇದ 243–ಕೆ ರಲ್ಲಿ ರಾಜ್ಯ ಚುನಾವಣಾ ಆಯೋಗಕ್ಕೆ ಪಂಚಾಯಿತಿಗಳ ಚುನಾವಣೆಗಳನ್ನು ನಡೆಸುವ ಸಂಬಂಧ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಗ್ರಾಮ ಪಂಚಾಯಿತಿಗಳ ಸಾರ್ವತ್ರಿಕ ಚುನಾವಣೆಯನ್ನು ಅನಿವಾರ್ಯತೆಯಿಂದ ತಾತ್ಕಾಲಿಕವಾಗಿ ಮುಂದೂಡಲು ತೀರ್ಮಾನಿಸಲಾಗಿದೆ. ಮುಂದಿನ ದಿನಗಳಲ್ಲಿ ಪರಿಸ್ಥಿತಿಯನ್ನು ಅವಲೋಕಿಸಿ ಗ್ರಾಮ ಪಂಚಾಯಿತಿಗಳ ಸಾರ್ವತ್ರಿಕ ಚುನಾವಣೆ ನಡಸುವ ಬಗ್ಗೆ ತೀರ್ಮಾನಿಸಲಾಗುವುದು, ಎಂದು ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸಿದೆ.

28/05/2020

ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ

ರಾಜ್ಯ ಚುನಾವಣಾ ಆಯೋಗ ಕರ್ನಾಟಕ

**ಇವರಿಗೆ:**

1. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ವ್ಯವಸ್ಥಾಪಕರು, ದಿನಪತ್ರಿಕೆ/ ದೂರ ದರ್ಶನ ಪ್ರಸಾರ ವಾಹಿನಿಗಳಿಗೆ ಕಳುಹಿಸಿ, ಸುದ್ದಿ ಮಾಧ್ಯಮದಲ್ಲಿ ಪ್ರಕಟಿಸುವಂತೆ ಕೋರಿದೆ.